## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಎಲ್.ಅನಿಲ್ ಕುಮಾರ್ ರವರು ನಿಯಮ 72ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.

**ವಿಷಯ :**

ಇತ್ತೀಚೆಗೆ ಸುರಿಯುತ್ತಿರುವ ಬಾರಿ ಮಳೆಯಿಂದ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿನ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಗೆ ಒಳಪಡುವ ಕೆಲವು ಶಾಲೆಗಳು ಹಾನಿಗೊಳಗಾಗಿ ಸದರಿ ಶಾಲಾ ಕೊಠಡಿಗಳಲ್ಲಿ ಮಕ್ಕಳಿಗೆ ಪಾಠ ಮಾಡಲಾಗದಂತಹ ದುಸ್ಥಿತಿಯಲ್ಲಿದೆ. ಇಂತಹ ಶಾಲೆಗಳನ್ನು ದುರಸ್ತಿ ಮಾಡುವಂತೆ ಜಿಲ್ಲಾಡಳಿತದಿಂದ ಹಾಗೂ ಜಿಲ್ಲಾ ಪಂಚಾಯತ್‌ನಿಂದ ಪ್ರಸ್ತಾವನೆ ಬಂದಿದ್ದರೂ ಕೂಡ ಸರ್ಕಾರ ಯಾವುದೇ ದುರಸ್ಥಿ ಕ್ರಮ ಕೈಗೊಳ್ಳದೇ ಇರುವುದರಿಂದ, ದುಸ್ಥಿಯಲ್ಲಿರುವ ಶಾಲಾ ಕಟ್ಟಡಗಳಲ್ಲೇ ಪಾಠಮಾಡುವಂತಃ ಅನಿವಾರ್ಯವಿದ್ದು ಭಯದ ವಾತಾವರಣದಲ್ಲಿ ಶಾಲಾ ಮಕ್ಕಳು ಮತ್ತು ಶಿಕ್ಷಕರು ಇರುವಂತಹ ವಾತಾವರಣ ಸೃಷ್ಟಿಯಾಗಿದೆ. ಅಲ್ಲದೇ ಮಕ್ಕಳ ಜೀವನದಲ್ಲಿ ಚೆಲ್ಲಾಟವಾಡುವಂತಹ ಪರಿಸ್ಥಿತಿ ನಿರ್ಮಾಣ ಆಗಿರುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಗಮನ ಸೆಳೆಯಲು ಅನುಮತಿ ನೀಡುವಂತೆ ಕೋರುತ್ತೇನೆ.

**ಉತ್ತರ:-**

<u>ಚಿಕ್ಕಬಳ್ಳಾಪುರ ಜಿಲ್ಲೆ:</u>

1. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಒಟ್ಟು 1449 ಪ್ರಾಥಮಿಕ ಶಾಲೆಗಳು, 111 ಪ್ರೌಢಶಾಲೆಗಳು (ಒಟ್ಟು 1560 ಶಾಲೆಗಳು) ಇದ್ದು, ಕಳೆದ ಸಾಲಿನಲ್ಲಿ ಹಾಗೂ ಪ್ರಸಕ್ತ ಸಾಲಿನಲ್ಲಿ ಸುರಿದ ಧಾರಾಕಾರ ಮಳೆಯಿಂದಾಗಿ ಸುಮಾರು 506 ಶಾಲೆಗಳ 1114 ಕೊಠಡಿಗಳು ಮಳೆಯಿಂದ ಹಾನಿಗೊಳಗಾಗಿರುತ್ತದೆ (ಮೇಲ್ಚಾವಣಿ ಸೋರುತ್ತಿರುವುದು, ಗೋಡೆಗಳು ಬಿರುಕು ಬಿಟ್ಟಿರುವುದು ಮತ್ತು ಇತರೆ ತೊಂದರೆಗಳು). ಸದರಿ ಶಾಲೆಗಳಲ್ಲಿನ ಕೊಠಡಿಗಳನ್ನು ದುರಸ್ಥಿ ಪಡಿಸಿಕೊಡುವಂತೆ ಪ್ರಸ್ತಾವನೆ ಸ್ವೀಕರಿಸಲಾಗಿರುತ್ತದೆ.

- ಜಿಲ್ಲಾ ಪಂಚಾಯತ್ ವತಿಯಿಂದ ಮಳೆಯಿಂದ ಹಾನಿಗೊಳಗಾದ ಶಾಲಾ ಕೊಠಡಿಗಳ ದುರಸ್ಥಿ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಒಟ್ಟು 166 ಶಾಲೆಗಳಿಗೆ ರೂ.262.78ಲಕ್ಷಗಳ ಅನುದಾನವನ್ನು ನಿಗದಿಗೊಳಿಸಿ ರೂ.199.39ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಿ ಕಾರ್ಯಪಾಲಕ ಅಭಿಯಂತರರು,(ಪಿ.ಆರ್.ಐ.ಡಿ ವಿಭಾಗ)ರವರನ್ನು ಅನುಷ್ಠಾನಾಧಿಕಾರಿಗಳನ್ನಾಗಿ ಗುರುತಿಸಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಂತೆ ಸೂಚಿಸಲಾಗಿರುತ್ತದೆ.
- 2021-22ನೇ ಸಾಲಿನಲ್ಲಿ ವಿಧಾನ ಸಭಾ ಕ್ಷೇತ್ರದ ಸರ್ಕಾರಿ ಶಾಲೆಗಳ ತುರ್ತು ದುರಸ್ಥಿ ಕಾರ್ಯಕ್ಕಾಗಿ ಒಟ್ಟು 28 ಶಾಲೆಗಳಿಗೆ 72.00 ಲಕ್ಷಗಳ ಅನುದಾನವನ್ನು ನಿಗದಿಗೊಳಿಸಿ ಆದೇಶಿಸಲಾಗಿದ್ದು, ಕಾಮಗಾರಿಗಳು ಮುಕ್ತಾಯಗೊಂಡಿರುತ್ತದೆ.
- 2021-22ನೇ ಸಾಲಿನಲ್ಲಿ ಅಮೃತ ಶಾಲಾ ಸೌಲಭ್ಯ ಯೋಜನೆಯಡಿಯಲ್ಲಿ ಒಟ್ಟು 22 ಶಾಲೆಗಳಿಗೆ ರೂ.157.75 ಲಕ್ಷಗಳ ಅನುದಾನವನ್ನು ದುರಸ್ಥಿಗಾಗಿ ಬಿಡುಗಡೆಗೊಳಿಸಲಾಗಿದ್ದು, ಕಾಮಗಾರಿಗಳು ಮುಕ್ತಾಯಗೊಂಡಿರುತ್ತದೆ.
- 2021-22ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಒಟ್ಟು 12 ಶಾಲೆಗಳ ದುರಸ್ಥಿ ಕಾರ್ಯಕ್ಕಾಗಿ ರೂ.36.75ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸಲಾಗಿದ್ದು, ಕಾಮಗಾರಿಗಳು ಮುಕ್ತಾಯಗೊಂಡಿರುತ್ತದೆ.
- 2021-22ನೇ ಸಾಲಿನಲ್ಲಿ ಒಟ್ಟಾರೆಯಾಗಿ 228 ಶಾಲೆಗಳಿಗೆ ರೂ.529.28ಲಕ್ಷಗಳ ದುರಸ್ಥಿ ಕಾರ್ಯವನ್ನು ವಿವಿಧ ಯೋಜನೆಗಳಡಿ ಕೈಗೆತ್ತಿಕೊಳ್ಳಲಾಗಿರುತ್ತದೆ.

- 2022–23ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಿಗೆ ತಲಾ ರೂ.30.00ಲಕ್ಷಗಳಂತೆ ಶಿಥಿಲಗೊಂಡ ಶಾಲೆಗಳ ದುರಸ್ತಿಗಾಗಿ ರೂ.150.00ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
- 2022–23ನೇ ಸಾಲಿಗೆ ವಿವೇಕ ಯೋಜನೆಯಡಿ 115 ಶಾಲಾ ಕೊಠಡಿಗಳು ಮಂಜೂರಾಗಿರುತ್ತವೆ.

**ಕೋಲಾರ ಜಿಲ್ಲೆ:**

2. ಕೋಲಾರ ಜಿಲ್ಲೆಯಲ್ಲಿ ಸಾಲಿನಲ್ಲಿ ಮಳೆಯಿಂದ ಹಾನಿಗೊಳಗಾಗಿರುವ ಒಟ್ಟು 126 ಶಾಲೆಗಳ್ಲಿನ 258 ಕೊಠಡಿಗಳು ದುರಸ್ಥಿಗಾಗಿ ಪ್ರಸ್ತಾವನೆ ಸ್ವೀಕೃತವಾಗಿರುತ್ತದೆ.

- 2021–22ನೇ ಸಾಲಿನಲ್ಲಿ ವಿಧಾನಸಭಾ ಕ್ಷೇತ್ರದ ಸರ್ಕಾರಿ ಶಾಲೆಗಳ ತುರ್ತು ದುರಸ್ಥಿ ಕಾರ್ಯಾಕ್ಕಾಗಿ ಪ್ರತಿ ತಾಲ್ಲೂಕಿಗೆ 01 ಶಾಲೆಯಂತೆ ಒಟ್ಟು 06 ಶಾಲೆಗಳಿಗೆ ರೂ.36.00 ಲಕ್ಷಗಳ ಅನುದಾನವನ್ನು ನಿಗಧಿಗೊಳಿಸಿ ಆದೇಶಿಸಲಾಗಿದ್ದು ದುರಸ್ಥಿ ಕಾಮಗಾರಿಗಳು ಮುಕ್ತಾಯಗೊಂಡಿರುತ್ತದೆ.
- 2021–22 ನೇ ಸಾಲಿನಲ್ಲಿ ಅಮೃತ ಶಾಲಾ ಸೌಲಭ್ಯ ಯೋಜನೆಯಡಿಯಲ್ಲಿ ಒಟ್ಟು 21 ಶಾಲೆಗಳಿಗೆ 210.00ಲಕ್ಷಗಳ ಅನುದಾನವನ್ನು ದುರಸ್ಥಿಗಾಗಿ ಬಿಡುಗಡೆಗೊಳಿಸಲಾಗಿದ್ದು ಕಾಮಗಾರಿಗಳು ಮುಕ್ತಾಯ ಹಂತದಲ್ಲಿರುತ್ತದೆ.
- 2021–22 ನೇ ಸಾಲಿನಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ಜಿಲ್ಲೆ ಒಟ್ಟು 195 ಶಾಲೆಗಳಿಗೆ ದುರಸ್ಥಿ ಕಾರ್ಯಾಕ್ಕಾಗಿ ರೂ.368.55ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು ಕಾಮಗಾರಿಗಳು ಮುಕ್ತಾಯ ಹಂತದಲ್ಲಿರುತ್ತದೆ.
- 2022–23ನೇ ಸಾಲಿನಲ್ಲಿ ಕೋಲಾರ ಜಿಲ್ಲೆಯ 6 ವಿಧಾನಸಭಾ ಕ್ಷೇತ್ರಗಳಿಗೆ ತಲಾ ರೂ.30.00 ಲಕ್ಷಗಳಂತೆ ಶಿಥಿಲಗೊಂಡ ಶಾಲೆಗಳ ದುರಸ್ತಿಗಾಗಿ ರೂ.180.00ಲಕ್ಷಗಳ ಅನುದಾನ ಬಿಡುಗಡೆ ಮಾಡಲಾಗಿದೆ.
- 2022–23ನೇ ಸಾಲಿಗೆ ವಿವೇಕ ಯೋಜನೆಯಡಿ 140 ಶಾಲಾ ಕೊಠಡಿಗಳು ಮಂಜೂರಾಗಿರುತ್ತವೆ.

ಮುಂದುವರೆದು, ಮಹಾತ್ಮಾ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಶಾಲೆಗಳಿಗೆ ಕಟ್ಟಡ ನಿರ್ಮಾಣ/ದುರಸ್ಥಿಯನ್ನೊಳಗೊಂಡಂತೆ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲು 14 ಮತ್ತು 15ನೇ ಹಣಕಾಸು ಆಯೋಗದಲ್ಲಿ ಸಂಬಂಧಿಸಿದ ಗ್ರಾಮ ಪಂಚಾಯತಿಗಳಿಗೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ಕ್ರಮವಹಿಸಲು ಸುತ್ತೋಲೆ ಸಂಖ್ಯೆ:ಗ್ರಾಅಪಂರಾ 435 ಜಿಪಸ 2021, ದಿನಾಂಕ:08.11.2021ರ ಮೂಲಕ ಸುತ್ತೋಲೆ ಹೊರಡಿಸಲಾಗಿದ್ದು, ಅಗತ್ಯ ಕ್ರಮವಹಿಸುವಂತೆ ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ.

ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಹಾಗೂ ಅಗತ್ಯತೆಗೆ ಅನುಗುಣವಾಗಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆ ಒಳಗೊಂಡಂತೆ ಹಂತಹಂತವಾಗಿ ರಾಜ್ಯದಾದ್ಯಂತ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಅಗತ್ಯ ಕ್ರಮವಹಿಸಲಾಗುತ್ತಿದೆ.

**ಸಂಖ್ಯೆ : ಇಪಿ 296 ಯೋಸಕ 2022**

(ಬಿ.ಸಿ.ನಾಗೇಶ್)

**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು**